All India Radio: Bangalore
National Bulletin In Kannada
12.10.2026  19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಸುಪ್ರೀಂ ಕೋರ್ಟ್‌ನ ಬಾಗಿಲುಗಳು ಎಲ್ಲರಿಗೂ ತೆರೆದಿವೆ - ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್
- ಅರ್ಥಶಾಸ್ತ್ರಜ್ಞರಾದ ರಾಬರ್ಟ್ ಇ. ಹಾಲ್, ಮೈಕೆಲ್ ವುಡ್‌ಫೋರ್ಡ್ ಅವರಿಗೆ ೨೦೨೬ ರ ಅರ್ಥಶಾಸ್ತ್ರದ ನೊಬೆಲ್ ಪ್ರಶಸ್ತಿ
- ನವದೆಹಲಿಯಲ್ಲಿ ಬ್ರಿಕ್ಸ್ ರಂಗಭೂಮಿ ಉತ್ಸವ ೨೦೨೬ಕ್ಕೆ ಕೇಂದ್ರ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಚಾಲನೆ
- ಇಂಡಿಯನ್ ಸೂಪರ್ ಲೀಗ್: ಇಂದಿನ ಪಂದ್ಯದಲ್ಲಿ ನಾರ್ತ್ ಈಸ್ಟ್ ಯುನೈಟೆಡ್-ಮೋಹನ್ ಬಾಗಾನ್ ತಂಡಗಳು ಮುಖಾಮುಖಿ

---

ಸುಪ್ರೀಂ ಕೋರ್ಟ್‌ನ ಬಾಗಿಲುಗಳು ಎಲ್ಲರಿಗೂ ತೆರೆದಿವೆ. ಯಾವುದೇ ಸಾಮಾನ್ಯ ನಾಗರಿಕ ಅಥವಾ ಚುನಾಯಿತ ಪ್ರತಿನಿಧಿಯಿಂದ ಬರುವ ಅರ್ಜಿಗಳನ್ನು ಸ್ವಾಗತಿಸಲಾಗುವುದು ಎಂದು ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಹೇಳಿದ್ದಾರೆ.

ಪ್ರತಿಯೊಬ್ಬ ಭಾರತೀಯ ನಾಗರಿಕನಿಗೂ ನ್ಯಾಯಾಲಯವನ್ನು ಸಂಪರ್ಕಿಸುವ ಹಕ್ಕಿದೆ. ನ್ಯಾಯಾಲಯವು ಅವರ ಅಹವಾಲುಗಳನ್ನು ಆಲಿಸುತ್ತದೆ ಮತ್ತು ಕಾನೂನಿನ ಪ್ರಕಾರ, ಸಿಗಬೇಕಾದ ಪರಿಹಾರವನ್ನು ಒದಗಿಸುತ್ತದೆ ಎಂದು ಅವರು ತಿಳಿಸಿದರು.

ಸಭೆ ನಡೆಸುವಂತೆ ಐ.ಎನ್.ಡಿ.ಐ. ಮೈತ್ರಿಕೂಟ ಮಾಡಿದ ಮನವಿಗೆ ಪ್ರತಿಕ್ರಿಯಿಸಿದ ಅವರು, ಭೇಟಿಗೆ ಅವಕಾಶ ಕೋರಿ ಹಿಂದಿನ ದಿನ ತಮಗೆ ಪತ್ರ ಬಂದಿತ್ತು ಮತ್ತು ತಾವು ಅವರನ್ನು ಭೇಟಿಯಾಗಲು ಏಕೆ ಸಾಧ್ಯವಾಗಲಿಲ್ಲ ಎಂಬುದನ್ನು ವಿವರಿಸಿ ನಿನ್ನೆ ರಾತ್ರಿಯೇ ಅದಕ್ಕೆ ಉತ್ತರಿಸಿದ್ದಾಗಿ ತಿಳಿಸಿದರು.

---

ಪ್ರತಿಭಟನೆ ಮತ್ತು ಮೆರವಣಿಗೆಗಳಿಗಾಗಿ ದೆಹಲಿ ಪೊಲೀಸರು ರಾಮಲೀಲಾ ಮೈದಾನ, ಬುರಾರಿ ಮೈದಾನ ಹಾಗೂ ಪೂರ್ವ ದೆಹಲಿಯ ಸಿಬಿಡಿ ಮೈದಾನವನ್ನು ನೂತನ ಸ್ಥಳಗಳಾಗಿ ಗುರುತಿಸಿದ್ದಾರೆ.

ದೆಹಲಿ ಪೊಲೀಸ್ ಆಯುಕ್ತ ಅನುರಾಗ್ ಕುಮಾರ್ ಹೊರಡಿಸಿರುವ ಆದೇಶದಂತೆ, ಜಂತರ್ ಮಂತರ್ ಅನ್ನು ಅಧಿಕೃತ ಪ್ರತಿಭಟನಾ ಸ್ಥಳಗಳ ಪಟ್ಟಿಯಿಂದ ಕೈಬಿಡಲಾಗಿದೆ.

ನಾಗರಿಕರ ಪ್ರತಿಭಟನೆ ಮತ್ತು ಮೆರವಣಿಗೆ ನಡೆಸುವ ಹಕ್ಕನ್ನು ಖಾತರಿಪಡಿಸುವ ನಿಟ್ಟಿನಲ್ಲಿ ಸೂಕ್ತ ಪರ್ಯಾಯ ಸ್ಥಳಗಳನ್ನು ಗುರುತಿಸಲು ಕೇಂದ್ರ ಗೃಹ ಸಚಿವಾಲಯ ಸಮಿತಿಯನ್ನು ರಚಿಸಿತ್ತು.

---

ಅಮೆರಿಕದ ಅರ್ಥಶಾಸ್ತ್ರಜ್ಞರಾದ ರಾಬರ್ಟ್ ಇ. ಹಾಲ್ ಮತ್ತು ಮೈಕೆಲ್ ವುಡ್‌ಫೋರ್ಡ್ ೨೦೨೬ ರ ಅರ್ಥಶಾಸ್ತ್ರದ ನೊಬೆಲ್ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಆರ್ಥಿಕ ಹಿಂಜರಿತದ ಸಮಯದಲ್ಲಿ ಆರ್ಥಿಕತೆಯನ್ನು ಸ್ಥಿರಗೊಳಿಸಲು ಸಹಾಯ ಮಾಡುವ ಸ್ಥೂಲ ಆರ್ಥಿಕ ಮಾದರಿಗಳನ್ನು ಅಭಿವೃದ್ಧಿಪಡಿಸಿದ್ದಕ್ಕಾಗಿ ಅವರು ನೊಬೆಲ್ ಪ್ರಶಸ್ತಿಗೆ  ಆಯ್ಕೆಯಾಗಿದ್ದಾರೆ. ಅವರ ಕೆಲಸವು ಹಣಕಾಸು ಮತ್ತು ವಿತ್ತೀಯ ನೀತಿಗಳಿಗೆ ಸೈದ್ಧಾಂತಿಕ ಆಧಾರವನ್ನು ಬಲಪಡಿಸಿದೆ. ಅಲ್ಲದೇ ಆರ್ಥಿಕ ಏರಿಳಿತಗಳಿಗೆ ಪ್ರತಿಕ್ರಿಯಿಸುವ ಸರ್ಕಾರಗಳು ಮತ್ತು ಕೇಂದ್ರ ಬ್ಯಾಂಕ್‌ಗಳ ಸಾಮರ್ಥ್ಯವನ್ನು ಸುಧಾರಿಸಿದೆ ಎಂದು ರಾಯಲ್ ಸ್ವೀಡಿಷ್ ಅಕಾಡೆಮಿ ಆಫ್ ಸೈನ್ಸಸ್ ಹೇಳಿದೆ.

ರಾಬರ್ಟ್ ಇ. ಹಾಲ್ ಸ್ಟ್ಯಾನ್‌ಫೋರ್ಡ್ ವಿಶ್ವವಿದ್ಯಾಲಯದಲ್ಲಿ ಪ್ರಾಧ್ಯಾಪಕರಾಗಿದ್ದರೆ, ಮೈಕೆಲ್ ವುಡ್‌ಫೋರ್ಡ್ ಕೊಲಂಬಿಯಾ ವಿಶ್ವವಿದ್ಯಾಲಯದಲ್ಲಿ ಪ್ರಾಧ್ಯಾಪಕರಾಗಿದ್ದಾರೆ.

ಪ್ರಶಸ್ತಿಯು ೧೨ ಮಿಲಿಯನ್ ಸ್ವೀಡಿಷ್ ಕ್ರೋನರ್ ಪ್ರಶಸ್ತಿಯನ್ನು ಹೊಂದಿದೆ. ಇದನ್ನು ಇಬ್ಬರು ಪ್ರಶಸ್ತಿ ವಿಜೇತರು ಸಮಾನವಾಗಿ ಹಂಚಿಕೊಳ್ಳಲಿದ್ದಾರೆ.

---

ರಕ್ಷಣಾ ಉತ್ಪಾದನೆ ಮತ್ತು ತಂತ್ರಜ್ಞಾನ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿ ಸ್ವಾವಲಂಬನೆ ಹಾಗೂ ಆಧುನೀಕರಣಕ್ಕೆ ಕೇಂದ್ರ ಸರ್ಕಾರ ಆದ್ಯತೆ ನೀಡಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ಭಾರತೀಯ ಸೇನೆ ಮತ್ತು ಭಾರತೀಯ ಆಹಾರ ನಿಗಮದ ನಡುವೆ ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಿದ ಸಂದರ್ಭದಲ್ಲಿ ಮಾತನಾಡಿದ ಅವರು, ದೇಶದ ರಕ್ಷಣಾ ಅಗತ್ಯಗಳ ಗಣನೀಯ ಭಾಗವನ್ನು ಈಗ ದೇಶೀಯವಾಗಿ ಉತ್ಪಾದಿಸಲಾಗುತ್ತಿದೆ ಎಂದರು.

ಸೈನಿಕರಿಗೆ ಉತ್ತಮ ಆಹಾರ, ಸೂಕ್ತ ಉಪಕರಣಗಳು, ಗುಣಮಟ್ಟದ ತರಬೇತಿ ಮತ್ತು ಅಗತ್ಯ ಸೌಲಭ್ಯಗಳನ್ನು ಒದಗಿಸುವುದರಿಂದ ಅವರ ಆತ್ಮಸ್ಥೈರ್ಯ ಹೆಚ್ಚುತ್ತದೆ ಎಂದು ರಾಜನಾಥ್ ಸಿಂಗ್ ತಿಳಿಸಿದರು.

---

ನೀತಿ ನಿರೂಪಣೆಯಲ್ಲಿ ಹೊಸ ದೃಷ್ಟಿಕೋನಗಳು, ನವೀನ ಆಲೋಚನೆಗಳು ಮತ್ತು ಬಲವಾದ ಉದ್ದೇಶದ ಪ್ರಜ್ಞೆಯನ್ನು ಅಳವಡಿಸಿಕೊಳ್ಳುವ ಮೂಲಕ ದೇಶದ ಯುವಜನರು ಭಾರತದ ಅಭಿವೃದ್ಧಿ ಪಯಣದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಕರೆ ನೀಡಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ 'ದೆಹಲಿ ಸಮಾವೇಶ ೨೦೨೬' ಉದ್ದೇಶಿಸಿ ಮಾತನಾಡಿದ ಅವರು, ಯುವ ಜನಸಂಖ್ಯೆಯು ಭಾರತದ ಪ್ರಮುಖ ಶಕ್ತಿಯಾಗಿದೆ. ದೇಶದ ಜನಸಂಖ್ಯೆಯ ಸರಾಸರಿ ವಯಸ್ಸು ೩೦ ವರ್ಷಕ್ಕಿಂತ ಕಡಿಮೆಯಿದೆ ಮತ್ತು ಮುಂದಿನ ಮೂರು ದಶಕಗಳವರೆಗೆ ಇದೇ ಸ್ಥಿತಿ ಮುಂದುವರಿಯುವ ನಿರೀಕ್ಷೆಯಿದೆ ಎಂದು ಹೇಳಿದರು.

೨೦೪೭ರ ವೇಳೆಗೆ ಭಾರತದ ಆರ್ಥಿಕತೆಯು ೩೦ ಟ್ರಿಲಿಯನ್ ಅಮೆರಿಕನ್ ಡಾಲರ್ ತಲುಪಲಿದೆ. ಯುವಕರ ಮಹತ್ವಾಕಾಂಕ್ಷೆ ಮತ್ತು ದೃಢನಿಶ್ಚಯವು ಅವರನ್ನು ಭಾರತದ ಅಭಿವೃದ್ಧಿಯ ಉತ್ತರಾಧಿಕಾರಿಗಳನ್ನಾಗಿ ಮಾತ್ರವಲ್ಲದೆ, ಭಾರತವನ್ನು ಸಮೃದ್ಧಿಯ ಭವಿಷ್ಯದತ್ತ ಕೊಂಡೊಯ್ಯುವ

ರೂವಾರಿಗಳನ್ನಾಗಿಯೂ ಮಾಡುತ್ತದೆ ಎಂದು ಸಚಿವ ಪಿಯೂಷ್ ಗೋಯಲ್ ವಿಶ್ವಾಸ ವ್ಯಕ್ತಪಡಿಸಿದರು.

---

'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ, ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ 'ಸ್ವಚ್ಛ ಭಾರತ್ ಮಿಷನ್ ಕುರಿತ ಒಂದು ವರದಿ ಇಲ್ಲಿದೆ.

೨೦೧೪ರಲ್ಲಿ ಪ್ರಾರಂಭವಾದ ಸ್ವಚ್ಛ ಭಾರತ್ ಅಭಿಯಾನವು ದೇಶದ ನೈರ್ಮಲ್ಯ ಕ್ಷೇತ್ರವನ್ನು ಕೇವಲ ಸರ್ಕಾರದ ಯೋಜನೆಯಾಗಿ ಉಳಿಸದೆ ಜನಪ್ರಿಯ 'ಜನ ಆಂದೋಲನ'ವನ್ನಾಗಿ ಪರಿವರ್ತಿಸಿದೆ.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ನೈರ್ಮಲ್ಯ ಮತ್ತು ನಾಗರಿಕ ಗೌರವಕ್ಕೆ ಆದ್ಯತೆ ನೀಡಲಾಗಿದ್ದು, ದೇಶಾದ್ಯಂತ ೧೨ ಕೋಟಿಗೂ ಹೆಚ್ಚು ಗೃಹ ಶೌಚಾಲಯಗಳನ್ನು ನಿರ್ಮಿಸುವ ಮೂಲಕ ೨೦೧೯ರ ವೇಳೆಗೆ ಭಾರತದ ಗ್ರಾಮಗಳನ್ನು 'ಬಹಿರಂಗ ಶೌಚ ಮುಕ್ತ' ಎಂದು ಘೋಷಿಸಲಾಯಿತು.

ಜೊತೆಗೆ, 'ಸ್ವಚ್ಛತಾ ಸರ್ವೇಕ್ಷಣೆ' ಸ್ಪರ್ಧೆಯು ನಗರಗಳು ಮತ್ತು ಪಟ್ಟಣಗಳಲ್ಲಿ ಸ್ವಚ್ಛತೆ, ತ್ಯಾಜ್ಯ ನಿರ್ವಹಣೆ ಹಾಗೂ ನಾಗರಿಕರ ಪಾಲ್ಗೊಳ್ಳುವಿಕೆಯನ್ನು ಹೆಚ್ಚಿಸಿದೆ.

---

ನವದೆಹಲಿಯಲ್ಲಿ ಇಂದು ಬ್ರಿಕ್ಸ್ ರಂಗಭೂಮಿ ಉತ್ಸವ ೨೦೨೬ಕ್ಕೆ ಕೇಂದ್ರ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಚಾಲನೆ ನೀಡಿದರು. ಈ ಉತ್ಸವ ಇದೇ ಬುಧವಾರದವರೆಗೆ ನಡೆಯಲಿದೆ.

ಉತ್ಸವ ಉದ್ದೇಶಿಸಿ ಮಾತನಾಡಿದ ಸಚಿವರು, ಜಾಗತಿಕ ರಾಜಕೀಯ ಉದ್ವಿಗ್ನತೆ, ಸಂಘರ್ಷ ಮತ್ತು ಅನಿಶ್ಚಿತತೆಗಳು ಹೆಚ್ಚುತ್ತಿರುವ ಸಂದರ್ಭದಲ್ಲಿ, ಸಂವಾದ, ಪರಸ್ಪರ ನಂಬಿಕೆ ಹಾಗೂ ಜಾಗತಿಕ ಸಾಮರಸ್ಯ ಬೆಳೆಸುವಲ್ಲಿ ಸಂಸ್ಕೃತಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ಮೂರು ದಿನಗಳ ಉತ್ಸವದಲ್ಲಿ ೧೦ ನಾಟಕ ತಂಡಗಳು, ೧೧ ನಾಟಕಗಳನ್ನು ಪ್ರದರ್ಶಿಸಲಿವೆ. ದೆಹಲಿಯ ರಾಷ್ಟ್ರೀಯ ನಾಟಕ ಶಾಲೆಯ ಅಭಿಮಂಚ್ ಸಭಾಂಗಣ ಸೇರಿದಂತೆ ವಿವಿಧ ವೇದಿಕೆಗಳಲ್ಲಿ ನಾಟಕಗಳು ಪ್ರದರ್ಶನಗೊಳ್ಳಲಿವೆ ಎಂದು ರಾಷ್ಟ್ರೀಯ ನಾಟಕ ಶಾಲೆಯ ನಿರ್ದೇಶಕ ಚಿತ್ತರಂಜನ್ ತ್ರಿಪಾಠಿ ತಿಳಿಸಿದ್ದಾರೆ.

ಭಾರತ, ಥಾಯ್ಲೆಂಡ್, ಇಂಡೋನೇಷ್ಯಾ, ರಷ್ಯಾ, ವಿಯೆಟ್ನಾಂ, ಇರಾನ್, ದಕ್ಷಿಣ ಆಫ್ರಿಕಾ, ಕಜಕಸ್ತಾನ್ ಮತ್ತು ಇಥಿಯೋಪಿಯಾ ಸೇರಿದಂತೆ ಹಲವು ದೇಶಗಳ ಕಲಾವಿದರು ಉತ್ಸವದಲ್ಲಿ ಪಾಲ್ಗೊಂಡಿದ್ದಾರೆ.

---

ಆಸ್ಪತ್ರೆಗಳು ಹಾಗೂ ವೈದ್ಯಕೀಯ ಸಂಸ್ಥೆಗಳು ಒದಗಿಸುವ ಸೇವೆ ಮತ್ತು ಸೌಲಭ್ಯಗಳ ದರಗಳನ್ನು ಪ್ರಮುಖವಾಗಿ ಪ್ರದರ್ಶಿಸುವಂತೆ ಕೇಂದ್ರ ಸರ್ಕಾರ, ಎಲ್ಲ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಸೂಚಿಸಿದೆ.

ಆರೋಗ್ಯ ಸೇವೆಗಳ ದರಗಳಲ್ಲಿ ಪಾರದರ್ಶಕತೆ ತರುವುದು, ರೋಗಿಗಳು ಸೂಕ್ತ ನಿರ್ಧಾರ ಕೈಗೊಳ್ಳಲು ನೆರವಾಗುವುದು ಹಾಗೂ ಬಿಲ್ಲಿಂಗ್‌ಗೆ ಸಂಬಂಧಿಸಿದ ವಿವಾದಗಳನ್ನು ತಡೆಯುವುದು ಈ ಕ್ರಮದ ಉದ್ದೇಶವಾಗಿದೆ.

ಈ ಸಂಬಂಧ ಕೇಂದ್ರ ಆರೋಗ್ಯ ಕಾರ್ಯದರ್ಶಿ ಪುಣ್ಯ ಸಲಿಲಾ ಶ್ರೀವಾಸ್ತವ ಅವರು ಎಲ್ಲ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆದಿದ್ದಾರೆ.

ಚಿಕಿತ್ಸೆಯ ಅಂದಾಜು ವೆಚ್ಚ ತಿಳಿದುಕೊಳ್ಳಲು, ವೈದ್ಯಕೀಯ ಖರ್ಚುಗಳನ್ನು ಯೋಜಿಸಿಕೊಳ್ಳಲು ಹಾಗೂ ಸೂಕ್ತ ಆರೋಗ್ಯ ಸೇವೆ ಆಯ್ಕೆ ಮಾಡಿಕೊಳ್ಳಲು ದರಗಳ ಪ್ರದರ್ಶನ, ರೋಗಿಗಳು ಮತ್ತು ಅವರ ಕುಟುಂಬಗಳಿಗೆ ಸಹಕಾರಿಯಾಗಲಿದೆ ಎಂದು ಪುಣ್ಯ ಸಲಿಲಾ ಶ್ರೀವಾಸ್ತವ ತಿಳಿಸಿದ್ದಾರೆ.

_____________________

ಅಸ್ಸಾಂನ ಗುವಾಹಟಿಯ ಇಂದಿರಾಗಾಂಧಿ ಅಥ್ಲೆಟಿಕ್ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಇಂಡಿಯನ್ ಸೂಪರ್ ಲೀಗ್ -ಐಎಸ್ಎಲ್ ಫುಟ್ಬಾಲ್ ಪಂದ್ಯಾವಳಿಯ ೧೪ನೇ ಪಂದ್ಯದಲ್ಲಿ ನಾರ್ತ್ ಈಸ್ಟ್ ಯುನೈಟೆಡ್ ಮತ್ತು ಮೋಹನ್ ಬಾಗಾನ್ ತಂಡಗಳು ಮುಖಾಮುಖಿಯಾಗಿವೆ. ಪಂದ್ಯ ಪ್ರಗತಿಯಲ್ಲಿದೆ.

__________ ಮುಕ್ತಾಯ __________